# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿನಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಸರ್ಕಾರದ ವಿವೇಚನಾ ಕೋಟಾದಡಿ ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಪತ್ರ ಸಂಖ್ಯೆ:ಪಿಡಿಎಸ್ 24 ಪಿಎಂಎಸ್ 2021, ದಿನಾಂಕ:21.04.2021.
2. ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 12 ಪಿಟಿಪಿ 2024, ದಿನಾಂಕ:30.08.2024
3. ಮಾನ್ಯ ಯೋಜನಾ ಸಚಿವರ ಟಿಪ್ಪಣಿ ಸಂಖ್ಯೆ: ಯೋ&ಸಾಂ/ ಸ/288/ 2024,ದಿನಾಂಕ:11.09.2024, ದಿನಾಂಕ:27.09.2024

*******

**<u>ಪ್ರಸ್ತಾವನೆ</u>**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಪತ್ರದಲ್ಲಿ 2024-25ನೇ ಸಾಲಿನ ಆಯವ್ಯಯದಲ್ಲಿ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗೆ ಒದಗಿಸಲಾಗಿರುವ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಶೇ.5ರಷ್ಟನ್ನು ಸರ್ಕಾರದ ವಿವೇಚನಾ ಕೋಟಾದಡಿ ನಿಗಧಿಪಡಿಸಿ ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರಿಂದ ಕಾಮಗಾರಿಗಳ ಪ್ರಸ್ತಾವನೆಯನ್ನು ಪಡೆದು ಅನುಷ್ಠಾನಗೊಳಿಸುವಂತೆ ತಿಳಿಸಲಾಗಿದೆ.

ಮೇಲೆ ಓದಲಾದ (2) ರಲ್ಲಿ ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖಾ ಸಚಿವರ ಸೂಚನೆಯಂತೆ, 2024-25ನೇ ಸಾಲಿನ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿವತಿಯಿಂದ ಸರ್ಕಾರದ ವಿವೇಚನಾ ಕೋಟಾದಡಿ ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 12 ಪಿಟಿಪಿ 2024, ದಿನಾಂಕ:30.08.2024 ರಲ್ಲಿ ಅಂದಾಜು ಮೊತ್ತ ರೂ.50.00 ಲಕ್ಷಗಳ 1 ಕಾಮಗಾರಿಗೆ ಅನುಮೋದನೆ ನೀಡಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಟಿಪ್ಪಣಿಯಲ್ಲಿ ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು, ಕಡತದಲ್ಲಿನ ಕಂಡಿಕೆ-35 ರಲ್ಲಿ ಮಾರ್ಪಡಿಸಿ ಅನುಮೋದಿಸಿರುವಂತೆ 2024-25ನೇ ಸಾಲಿನ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿವತಿಯಿಂದ ಲಭ್ಯವಿರುವ ಮೊತ್ತದಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಆದೇಶಿಸಿರುತ್ತಾರೆ.

| ಕ್ರ. ಸಂ | ಕಾಮಗಾರಿ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು | 42.00 |
| 2 | ಚಿತ್ರದುರ್ಗ ಜಿಲ್ಲೆ ವಿದ್ಯಾರ್ಥಿ ನಿಲಯದ ಕಟ್ಟಡ ಕಾಮಗಾರಿಗಳು (ಹಿರಿಯೂರು ತಾಲ್ಲೂಕು ಒಕ್ಕಲಿಗರ ಸಂಘ (ರಿ), ಹಿರಿಯೂರು | 50.50 |
| 3 | ಚಿತ್ರದುರ್ಗ ಜಿಲ್ಲೆ ವಿವಿಧ ಅಭಿವೃದ್ಧಿ ಕಾಮಗಾರಿಗಳು | 50.00 |
| 4 | ತುಮಕೂರು ಜಿಲ್ಲೆ ಮೂಕನಹಳ್ಳಿ ಪಟ್ಟಣದ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಗ್ರಾಮಾಭಿವೃದ್ಧಿ ಸೇವಾ ಟ್ರಸ್ಟ್ (ರಿ) ನ ಸಮುದಾಯ ಭವನದ ಮುಂದುವರೆದ ಕಾಮಗಾರಿಗಳು | 5.00 |
| | **ಒಟ್ಟು ರೂ.** | **147.50** |

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಸರ್ಕಾರದ ವಿವೇಚನಾ ಕೋಟಾದಡಿ ಲಭ್ಯವಿರುವ ರೂ.197.50 ಲಕ್ಷಗಳ ಪೈಕಿ ಬಾಕಿ ಉಳಿದಿರುವ ರೂ.147.50 ಲಕ್ಷಗಳ ನಾಲ್ಕು ಕಾಮಗಾರಿಗಳ ಕ್ರಿಯಾಯೋಜನೆಗೆ ಅನುಮೋದನೆ ನೀಡಲು ಸರ್ಕಾರವು ಉದ್ದೇಶಿಸಿದ್ದು, ಅದರಂತೆ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ:ಪಿಡಿಎಸ್ 12 ಪಿಟಿಪಿ 2024, ಬೆಂಗಳೂರು**
**ದಿನಾಂಕ: 15.10.2024**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ರೂ.3950.00 ಲಕ್ಷಗಳ (ಬಂಡವಾಳ/ ವಿ.ಘ.ಯೋ/ ಗಿ.ಉ.ಯೋ) ಅನುದಾನದಲ್ಲಿ ಶೇ.5 ರಷ್ಟು ಅಂದರೆ ರೂ.197.50 ಲಕ್ಷಗಳ ಸರ್ಕಾರದ ವಿವೇಚನಾ ಕೋಟಾದಡಿ (GDQ)ಗೆ ಮೀಸಲಿಟ್ಟ ಅನುದಾನದ ಪೈಕಿ ಬಾಕಿ ಉಳಿದಿರುವ ರೂ.147.50 (ರೂ.ಒಂದು ನೂರ ನಲವತ್ತೇಳು ಲಕ್ಷಗಳ ಐವತ್ತು ಸಾವಿರಗಳು ಮಾತ್ರ) ಲಕ್ಷಗಳಲ್ಲಿ ಈ ಕೆಳಗೆ ನಮೂದಿಸಿರುವ ನಾಲ್ಕು ಕಾಮಗಾರಿಗಳ ಕ್ರಿಯಾ ಯೋಜನೆಗೆ ಸರ್ಕಾರವು ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ. ಸಂ | ಕಾಮಗಾರಿ ವಿವರ | ಮೊತ್ತ (ರೂ.ಲಕ್ಷಗಳಲ್ಲಿ) |
|---|---|---|
| 1 | ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳು | 42.00 |
| 2 | ಚಿತ್ರದುರ್ಗ ಜಿಲ್ಲೆ ವಿದ್ಯಾರ್ಥಿ ನಿಲಯದ ಕಟ್ಟಡ ಕಾಮಗಾರಿಗಳು (ಹಿರಿಯೂರು ತಾಲ್ಲೂಕು ಒಕ್ಕಲಿಗರ ಸಂಘ (ರಿ), ಹಿರಿಯೂರು | 50.50 |
| 3 | ಚಿತ್ರದುರ್ಗ ಜಿಲ್ಲೆ ವಿವಿಧ ಅಭಿವೃದ್ಧಿ ಕಾಮಗಾರಿಗಳು | 50.00 |
| 4 | ತುಮಕೂರು ಜಿಲ್ಲೆ ಮೂಕನಹಳ್ಳಿ ಪಟ್ಟಣದ ಶ್ರೀ ಲಕ್ಷ್ಮೀನರಸಿಂಹ ಸ್ವಾಮಿ ಗ್ರಾಮಾಭಿವೃದ್ಧಿ ಸೇವಾ ಟ್ರಸ್ಟ (ರಿ) ನ ಸಮುದಾಯ ಭವನದ ಮುಂದುವರೆದ ಕಾಮಗಾರಿಗಳು | 5.00 |
| | **ಒಟ್ಟು ರೂ.** | **147.50** |

**ಷರತ್ತುಗಳು:-**

1. ಅನುಮೋದನೆ ನೀಡಿರುವ ಕ್ರಿಯಾಯೋಜನೆಯ ಕಾಮಗಾರಿಗಳನ್ನು 2024-25ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿರುವ ಅನುದಾನದಲ್ಲಿ ಕೆಟಿಪಿಪಿ ಕಾಯ್ದೆಯನ್ವಯ ನಿಯಮಾನುಸಾರ ಅನುಷ್ಠಾನಗೊಳಿಸತಕ್ಕದ್ದು.
2. ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಯ ಮಾರ್ಗಸೂಚಿಗಳನ್ವಯ ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
3. SCP/TSP ಕಾಮಗಾರಿಗಳನ್ನು SCP/TSP ಕಾಯ್ದೆ 2013ರನ್ವಯ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಸಮುದಾಯದವರಿಗೆ ಉಪಯೋಗವಾಗುವಂತೆ ಅನುಷ್ಠಾನಗೊಳಿಸತಕ್ಕದ್ದು. ಯೋಜನಾ ಅನುಷ್ಠಾನದಲ್ಲಿ ವ್ಯತ್ಯಾಸವಾದಲ್ಲಿ SCP/TSP ಕಾಯ್ದೆಯ ಕಂಡಿಕೆ 25 ರ ಸಂಬಂಧಿಸಿದ ಅಧಿಕಾರಿಗಳನ್ನು ಜವಬ್ದಾರರನ್ನಾಗಿ ಮಾಡಲಾಗುವುದು.
4. ಕ್ರಿಯಾಯೋಜನೆಗೆ ಅನುಮೋದನೆ ನೀಡಿರುವ ಅಂದಾಜು ಮಿತಿಯಲ್ಲಿಯೇ (ಟೆಂಡರ್ ಪ್ರೀಮಿಯಂ ಸೇರಿ) ಅನುಷ್ಠಾನಗೊಳಿಸತಕ್ಕದ್ದು.

--3..,

ಈ ಆದೇಶವು ಸರ್ಕಾರವು ಆಯಾ ಸಂದರ್ಭದಲ್ಲಿ ಹೊರಡಿಸುವ ಆದೇಶ ಮತ್ತು ಸುತ್ತೋಲೆಗೆ ಒಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಡಿ.ಚಂದ್ರಶೇಖರಯ್ಯ)**
ನಿರ್ದೇಶಕರು
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ.
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಇವರಿಗೆ,**

1. ಪ್ರಧಾನ ಮಹಾಲೇಖಪಾಲರು,(ಲೆಕ್ಕ ಪತ್ರ)/(ಲೆಕ್ಕ ಪರಿಶೋಧನಾ ಮತ್ತು 1&2, ಕರ್ನಾಟಕ, ಬೆಂಗಳೂರು.
2. ಕಾರ್ಯದರ್ಶಿ, ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿ, ತಮಟಕಲ್ಲು ರಸ್ತೆ ಚಿತ್ರದುರ್ಗ-577 502
3. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರ ಆಪ್ತ ಕಾರ್ಯದರ್ಶಿ , ವಿಕಾಸಸೌಧ, ಬೆಂಗಳೂರು.
5. ಶಾಖಾಧಿಕಾರಿ, ಸ್ಕೀಮರ ಶಾಖೆ, ಯೋಜನಾ ಇಲಾಖೆ. (ಕಾಂಪೆಂಡಿಯಮ್ ಗೋಸ್ಕರ)
6. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿ.

*****

## ಸರ್ಕಾರದ ಆದೇಶ ಸಂಖ್ಯೆ:ಪಿಡಿಎಸ್ 12 ಪಿಟಿಪಿ 2024, ದಿನಾಂಕ:15.10.2024ರ
## ಅನುಬಂಧ-1

**ಜಿಲ್ಲೆ: ಕೋಲಾರ**

(ರೂ. ಲಕ್ಷಗಳಲ್ಲಿ)

| ಕ್ರ. ಸಂ. | ವಿಧಾನಸಭಾ ಕ್ಷೇತ್ರ | ಕಾಮಗಾರಿಯ ಹೆಸರು | ಅಂದಾಜು ಮೊತ್ತ |
|---|---|---|---|
| 1 | 2 | 3 | 4 |
| 1 | ಶ್ರೀನಿವಾಸಪುರ | ಕೋಲಾರ ಜಿಲ್ಲೆ ಸುಗಟೂರು ಹೋಬಳಿ ಅಂಕತಟ್ಟಿ ಗ್ರಾಮದ ದುಂಡುದಾರಿಯಿಂದ ಬಂತಿಗಾನಹಳ್ಳಿ ರಸ್ತೆವರೆಗೂ ರಸ್ತೆ ಅಭಿವೃದ್ಧಿ ಕಾಮಗಾರಿ. **(ಎಸ್.ಸಿ.ಪಿ)** | 5 |
| 2 | ಮಾಲೂರು | ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕು ಹರಳೇರಿ ಗ್ರಾಮ ಪಂಚಾಯತಿ ಡಿ.ಉಪ್ಪಾರಹಳ್ಳಿ ಗ್ರಾಮದ ಅಶ್ವತಪ್ಪನ ಮನೆಯಿಂದ ನಾರಾಯಣಪ್ಪನ ಮನೆಯವರೆಗೂ ಸಿ.ಸಿ ರಸ್ತೆ ಅಭಿವೃದ್ಧಿ ಕಾಮಗಾರಿ.**(ಟಿ.ಎಸ್.ಪಿ)** | 4 |
| 3 | ಕೋಲಾರ | ಕೋಲಾರ ಜಿಲ್ಲೆ ಕೋಲಾರ ತಾಲ್ಲೂಕು ಮಧುವತಿ ಗ್ರಾಮದಲ್ಲಿ ಅಲ್ಪ ಸಂಖ್ಯಾತರ ಮನೆ ಕಡೆಗೆ ಸಿ.ಸಿ ರಸ್ತೆ ನಿರ್ಮಾಣ ಕಾಮಗಾರಿ. | 4 |
| 4 | ಬಾಗೇಪಲ್ಲಿ | ಕೋಲಾರ ಜಿಲ್ಲೆ ಗುಡಿಬಂಡೆ ತಾಲ್ಲೂಕು ಹಂಪಸಂದ್ರ ಗ್ರಾಮದ ವಿ.ಎಸ್.ಎಸ್.ಎನ್ ಕಟ್ಟಡ ನಿರ್ಮಾಣದ ಮುಂದುವರೆದ ಕಾಮಗಾರಿ | 5 |
| 5 | ಚಿಂತಾಮಣಿ | ಚಿಂತಾಮಣಿ ತಾಲ್ಲೂಕು ಉಪ್ಪಾರ ಪೇಟೆ ಗ್ರಾಮದಲ್ಲಿ ಫಯಾಜ್ ಮನೆ ಕಡೆಯಿಂದ ಎಂ.ಜಿ ರೋಡ್ ಮುಖಾಂತರ ಈದ್ಗಾದವರೆಗೆ ಸಿ.ಸಿ ರಸ್ತೆ ಕಾಮಗಾರಿ. | 10 |
| 6 | ಶಿಡ್ಲಘಟ್ಟ | ಶಿಡ್ಲಘಟ್ಟ ಕ್ಷೇತ್ರದ ಚೀಮಂಗಲ ಗ್ರಾಮದಲ್ಲಿ ಬ್ರಾಹ್ಮಣರ ಶ್ಮಶಾಣಕ್ಕೆ ಹೋಗುವ ರಸ್ತೆ ಅಭಿವೃದ್ಧಿ ಕಾಮಗಾರಿ. | 3 |
| 7 | ಕೋಲಾರ | ಕೋಲಾರ ನಗರದ ಬಾಲಕೀಯರ ಪದವಿ ಪೂರ್ವ ಕಾಲೇಜಿನ ನೂತನ ಕಟ್ಟಡ ನಿರ್ಮಾಣ ಕಾಮಗಾರಿ. | 11 |
| | | **ಒಟ್ಟು ಅನುದಾನ ರೂ.** | **42.00** |

**ಜಿಲ್ಲೆ: ಚಿತ್ರದುರ್ಗ**

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾಮಗಾರಿ ವಿವರ | ಅಂದಾಜು ಮೊತ್ತ |
|---|---|---|
| 1 | ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕು ಮತ್ತೋಡು ಗ್ರಾಮ ಪಂಚಾಯತಿ ಕಾರ್ಯಾಲಾಯದ ಮೂಲಭೂತ ಸೌಕರ್ಯ ಕಲ್ಪಿಸುವುದು. | 35 |
| 2 | ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ಚಳ್ಳಕೆರೆ ತಾಲ್ಲೂಕು ಹೊನ್ನೂರು ಗ್ರಾಮದ ಎಸ್,ಸಿ ಕಾಲೋನಿಯಲ್ಲಿ ಸಿ.ಸಿ ರಸ್ತೆ ನಿರ್ಮಾಣ. (ಎಸ್.ಸಿ.ಪಿ) | 5 |
| 3 | ಚಿತ್ರದುರ್ಗ ಜಿಲ್ಲೆ ಹೊಸದುರ್ಗ ತಾಲ್ಲೂಕು ಮಣಿಸಿನೂರು ಗ್ರಾಮದ ನಾಗಮ್ಮನವರ ಮನೆಯಿಂದ ಗೊಲ್ಲರಹಟ್ಟಿಯ ರಸ್ತೆಯವರೆಗೂ ಸಿ.ಸಿ ರಸ್ತೆ ನಿರ್ಮಾಣ. (ಎಸ್.ಸಿ.ಪಿ) | 5 |
| 4 | ಚಿತ್ರದುರ್ಗ ಜಿಲ್ಲೆ, ಹೊಳಲ್ಕೆರೆ ತಾಲ್ಲೂಕು ಹೊಳಲ್ಕೆರೆ ನಗರದ ಎಂಟನೇ ವಾರ್ಡಿನ ಎಸ್.ಟಿ ಕಾಲೋನಿಯಲ್ಲಿ ಸಮುದಾಯ ಭವನ ನಿರ್ಮಾಣ (ಟಿ.ಎಸ್.ಪಿ) | 5 |
| | **ಒಟ್ಟು ಅನುದಾನ ರೂ.** | **50.00** |

(ಡಿ.ಚಂದ್ರಶೇಖರಯ್ಯ)
ನಿರ್ದೇಶಕರು,
ಪ್ರದೇಶಾಭಿವೃದ್ಧಿ ಮಂಡಳಿ ವಿಭಾಗ
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.